499(372) ಶ್ರೀ ಕುಮಾರ್ ಬಂಗಾರಪ್ಪ ಎಸ್ (ಸೊರಬ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಸೊರಬ ತಾಲ್ಲೂಕಿನ ಆನವಟ್ಟಿಗೆ ಉರ್ದು ಪ್ರೌಢಶಾಲೆ ಮಂಜೂರು ಮಾಡಲಾಗಿದೆಯೇ,

ಆ) ಉರ್ದು ಪ್ರೌಢಶಾಲೆ ಮಂಜೂರು ಮಾಡಲು ಯಾವ ಮಾನದಂಡ ಅನುಸರಿಸಲಾಗುವುದು,

ಇ) ಈ ತಾಲ್ಲೂಕಿನಲ್ಲಿರುವ ಕನ್ನಡ ಮತ್ತು ಉರ್ದು ಶಿಕ್ಷಕರ ಸಂಖ್ಯೆ ಎಷ್ಟು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಪ್ರಸ್ತಾವನೆ ಬಂದಿರುವುದಿಲ್ಲ

ಆ) ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಈ ಕೆಳಕಂಡಂತೆ ಮಾನದಂಡವನ್ನು ಪಾಲಿಸಲಾಗುತ್ತಿದೆ

1 5 ಕಿ.ಮೀ ಅಂತರದಲ್ಲಿ ಯಾವುದೇ ಸರ್ಕಾರಿ ಅಥವಾ ಅನುದಾನಿತ ಪ್ರೌಢಶಾಲೆಗಳು ಇರಬಾರದು

1) ಕನಿಷ್ಠ 50 ಮಕ್ಕಳು 8ನೇ ತರಗತಿಗೆ ದಾಖಲಾಗುವಂತಿರಬೇಕು

2) ಶಾಲೆಗೆ ಬೇಕಾದ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ಖಾಲಿ ನಿವೇಶನ ಇರಬೇಕು

2 ಡಾ ನಂಜುಂಡಪ್ಪ ವರದಿಯಂತೆ ಹಿಂದುಳಿದ ತಾಲ್ಲೂಕುಗಳಿಗೆ ಪ್ರಾಧಾನ್ಯತೆ ನೀಡಲಾಗುತ್ತಿದೆ

3 ಮಾನ್ಯ ಶಾಸಕರು, ಮತ್ತಿತರ ಜನಪ್ರತಿನಿಧಿಗಳ ಶಿಫಾರಸ್ಸುಗಳನ್ನು ಪರಿಗಣಿಸಲಾಗುತ್ತಿದೆ

ಇ) ಈ ತಾಲ್ಲೂಕಿನಲ್ಲಿ

ಎ) 18 ಉರ್ದು ಮಾಧ್ಯಮ ಪ್ರಾಥಮಿಕ ಶಾಲೆಗಳಿದ್ದು, 48 ಶಿಕ್ಷಕರಿರುತ್ತಾರೆ

* 293 ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಗಳಿದ್ದು, 800 ಶಿಕ್ಷಕರಿರುತ್ತಾರೆ

ಬಿ) 01 ಉರ್ದು ಮಾಧ್ಯಮ ಪ್ರೌಢಶಾಲೆಗಳಿದ್ದು 09 ಶಿಕ್ಷಕರಿರುತ್ತಾರೆ

* 14 ಕನ್ನಡ ಮಾಧ್ಯಮ ಪ್ರೌಢಶಾಲೆಗಳಿದ್ದು 137 ಶಿಕ್ಷಕರಿರುತ್ತಾರೆ

500(366) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ತುಮಕೂರು ಜಿಲ್ಲೆಯಲ್ಲಿರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು, ಅವುಗಳಲ್ಲಿ ಯಾವ ಯಾವ ಪದವಿ ವಿಭಾಗಗಳ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡಲಾಗಿದೆ,

ಆ) ಈ ಕಾಲೇಜುಗಳಿಗೆ ಸ್ವಂತ ಕಟ್ಟಡ ಮತ್ತಿತರ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆಯೇ,

ಇ) ಇಲ್ಲವಾದಲ್ಲಿ, ಈ ಬಗ್ಗೆ ಕೈಗೊಳ್ಳುವ ಸಕಾಲಿಕ ಕ್ರಮಗಳೇನು,

ಈ) ಈ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಗಳು ಪೂರ್ಣ ಪ್ರಮಾಣದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ,

ಉ) ಖಾಲಿ ಇರುವ ವಿವಿಧ ಬೋಧಕ ಸಿಬ್ಬಂದಿಗಳೆಷ್ಟು,

ಊ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ತುಮಕೂರು ಜಿಲ್ಲೆಯಲ್ಲಿ ಒಟ್ಟು 12 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿವೆ ಅವುಗಳಲ್ಲಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡಲಾಗಿದೆ